<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>
<u>ಸಿ.ಸಿ.470/2024</u>

ಸಾಕ್ಷಿದಾರರ ಹೆಸರು	: ನಯನ	ಪ್ರಾಸಾ-2
ತಂದೆಯ ಹೆಸರು	: ಚಂದ್ರೇಗೌಡ	ಚಾಸಾ-2
ವಯಸ್ಸು	: 34 ವರ್ಷ	ಪ್ರಮಾಣ ವಚನ ಬೋಧಿಸಲಾದ
ಉದ್ಯೋಗ	: ಕೃಷಿ	ದಿನಾಂಕಃ 29.10.2025
ವಾಸಸ್ಥಳ	: ಊರುಬಗೆ	

<u>:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ.ಸ.ಸ.ಅ. ರವರಿಂದ:</u>

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-1 ರವರ ಪರಿಚಯ ನನಗಿದೆ. ಚಾಸಾ-3 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ನಿಪಿ-3 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-4 ರ ಫೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

2 ವರ್ಷದ ಹಿಂದೆ ನಾನು ಮೂಡಿಗೆರೆಯ ಲಯನ್ ಸರ್ಕಲ್ ನಲ್ಲಿ ಇದ್ದಾಗ ಪೋಲಿಸರು ನನ್ನನ್ನು ಕರೆದು ಸಹಿಗಳನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನನ್ನ ಸಹಿಯನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

<u>ಪಾಟೀ ಸವಾಲು: ಪ್ರಾಜ್ಞ್ಯಾ.ಸ.ಸ.ಅ. ರವರಿಂದ:</u>

ಸಾಕ್ಷಿಗೆ ನಿಪಿ-3 ರಲ್ಲಿನ ಸಂಪೂರ್ಣ ವಿಚಾರವನ್ನು ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>
<u>ಮರು ವಿಚಾರಣೆ ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.